# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 851 (1151)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ವಿಷಯ : ಹನಿ ನೀರಾವರಿ ಯೋಜನೆ ಸಾಧನಗಳ ಅಳವಡಿಕೆ ಮತ್ತು ಬಳಕೆ ಅವಧಿ ಬಗ್ಗೆ

(ಅ) ಕಳೆದ 2 ವರ್ಷಗಳಿಂದ ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ರೈತರುಗಳಿಗೆ ತೋಟಗಾರಿಕೆ ಇಲಾಖೆಯಿಂದ ಕೇಂದ್ರ ಮತ್ತು ರಾಜ್ಯದ ವಿವಿಧ ಯೋಜನೆಗಳಲ್ಲಿ ಬಿಡುಗಡೆ ಮಾಡಲಾದ ಅನುದಾನವೆಷ್ಟು; (ತಾಲ್ಲೂಕುವಾರು, ಯೋಜನಾವಾರು ವಿವರ ನೀಡುವುದು)

(ಆ) ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ತೋಟಗಾರಿಕೆ ಬೆಳೆಗಳಾದ ಈರುಳ್ಳಿ, ತೆಂಗು, ಅಡಿಕೆ ಬೆಳೆಗಳ ಶೇಖರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಘಟಕಗಳ ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಕಳೆದ 2 ವರ್ಷಗಳಿಂದ ನಾಗಮಂಗಲ ತಾಲ್ಲೂಕು ಕ್ಷೇತ್ರಕ್ಕೆ ಹನಿ ನೀರಾವರಿ ಯೋಜನೆಯಲ್ಲಿ ಒದಗಿಸಿರುವ ಅನುದಾನವೆಷ್ಟು; (ಫಲಾನುಭವಿ ರೈತರ ಬಗ್ಗೆ ಹೋಬಳಿವಾರು ಮಾಹಿತಿ ನೀಡುವುದು)

(ಈ) ಹನಿ ನೀರಾವರಿ ಯೋಜನೆ ಸಾಧನಗಳ ಅಳವಡಿಕೆ ಮತ್ತು ಬಳಕೆ ಅವಧಿ ಬಗ್ಗೆ ಸರ್ಕಾರ ನಿಗದಿಪಡಿಸಿರುವ ಮಾನದಂಡವೇನು; (ಮಾಹಿತಿ ನೀಡುವುದು)

(ಉ) ಕಳೆದ 2 ವರ್ಷಗಳಿಂದ ನಾಗಮಂಗಲ ವಿಧಾನಸಭಾ ಕ್ಷೇತ್ರದಲ್ಲಿ ಇಲ್ಲಿಯವರೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಕೃಷಿ ಯಾಂತ್ರೀಕರಣ ಯೋಜನೆಯಡಿಯಲ್ಲಿ ಒದಗಿಸಲಾದ ಅನುದಾನವೆಷ್ಟು; (ಹೋಬಳಿವಾರು ಫಲಾನುಭವಿ ರೈತರ ಮಾಹಿತಿ ನೀಡುವುದು)